## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 772
2. ಸದಸ್ಯರ ಹೆಸರು : ಶ್ರೀಮತಿ ಭಾರತಿ ಶೆಟ್ಟಿ (ನಾಮ ನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ದಿನಾಂಕ : 23.07.2024
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರಿನ ಸಮೀಪ ಎರಡನೆಯ ವಿಮಾನ ನಿಲ್ದಾಣ ಸ್ಥಾಪಿಸುವ ಬಗ್ಗೆ ಸರ್ಕಾರದ ನೀತಿ ನಿಲುವುಗಳೇನು; | Airports Authority of India (AAI) ಮತ್ತು Bangalore International Airport Limited (BIAL)ನೊಂದಿಗೆ ನಡೆದ ಒಪ್ಪಂದದನ್ವಯ ಬೆಂಗಳೂರು ಅಂತರಾಷ್ಟ್ರೀಯ ವಿಮಾನನಿಲ್ದಾಣ ಪ್ರಾರಂಭವಾದ ದಿನದಿಂದ 25 ವರ್ಷ ಪೂರ್ಣಗೊಳ್ಳುವವರೆಗೂ 150 ಕಿ.ಮೀ. ವ್ಯಾಪ್ತಿಯಲ್ಲಿ ಯಾವುದೇ ವಿಮಾನನಿಲ್ದಾಣವನ್ನು ಕಾರ್ಯಾಚರಣೆಗೊಳಿಸಲು ಅವಕಾಶವಿರುವುದಿಲ್ಲ. ಈ ಒಪ್ಪಂದವು 2033ನೇ ಸಾಲಿನವರೆಗೂ ಜಾರಿಯಲ್ಲಿರುತ್ತದೆ. ಬೆಂಗಳೂರಿನ ಸಮೀಪ 2ನೇ ವಿಮಾನನಿಲ್ದಾಣವನ್ನು ಸ್ಥಾಪಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |
| (ಆ) | ಈ ನಿಟ್ಟಿನಲ್ಲಿ ನಡೆದಿರುವ ಪ್ರಕ್ರಿಯೆಗಳೇನು; (ವಿವರ ಒದಗಿಸುವುದು) | ಬೆಂಗಳೂರು ಅಂತರಾಷ್ಟ್ರೀಯ ವಿಮಾನನಿಲ್ದಾಣದ ಸಮೀಪ ಎರಡನೇಯ ವಿಮಾನನಿಲ್ದಾಣವನ್ನು ಸ್ಥಾಪಿಸುವ ವಿಷಯದ ಕುರಿತು ಅಧ್ಯಯನವನ್ನು ನಡೆಸಿ ವರದಿ ನೀಡುವಂತೆ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ ಐಡೆಕ್ ಸಂಸ್ಥೆಗೆ ಸೂಚಿಸಲಾಗಿರುತ್ತದೆ. ಅದರಂತೆ, ಸಂಸ್ಥೆಯು ಪ್ರಾಥಮಿಕ ಅಧ್ಯಯನವನ್ನು ನಡೆಸಿ ಬೆಂಗಳೂರಿನಿಂದ 100 ಕಿ.ಮೀ. ವ್ಯಾಪ್ತಿಯಲ್ಲಿ ಸ್ಥಳಗಳನ್ನು ಗುರುತಿಸುವ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.<br><br>ಈ ಕೆಳಕಂಡ 4 ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು ಸಂಭಾವ್ಯ ಸ್ಥಳಗಳನ್ನು ಗುರುತಿಸಲಾಗುವುದು:<br>1. ತಾಂತ್ರಿಕ ಕಾರ್ಯಸಾಧುತ್ವ – ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳು, ಗುಡ್ಡಗಾಡು ಪ್ರದೇಶ, ಎತ್ತರದ ರಚನೆಗಳು.<br>2. ಸಂಪರ್ಕ-ರಸ್ತೆ (NH & SH), ರೈಲು ಮತ್ತು ಮೆಟ್ರೋ ಸಂಪರ್ಕ.<br>3. ಪ್ರಯಾಣಿಕರಿಗೆ ಉದ್ದೇಶಿತ ವಿಮಾನ ನಿಲ್ದಾಣವನ್ನು ತಲುಪುವ ದೂರು ಮತ್ತು ಸಮಯ.<br>4. ಸ್ಥಳ ವೈಶಿಷ್ಟ್ಯತೆಗಳು – ವಿಸ್ತಾರವಾದ ಭೂಪ್ರದೇಶ, ಜಮೀನಿನ ಪ್ರಕಾರಗಳು, ಕಡಿಮೆ ಜನಸಾಂದ್ರತೆಯ ಪ್ರದೇಶ ಮತ್ತು ಜಲಸಂಪನ್ಮೂಲದ ಲಭ್ಯತೆ. |
| (ಇ) | ಸಂಭಾವ್ಯ ಸ್ಥಳಗಳನ್ನು ಸರ್ಕಾರ ಪರಿಶೀಲಿಸುತ್ತಿದೆಯೇ; ಹಾಗಿದ್ದಲ್ಲಿ, ಅವುಗಳು ಯಾವುವು? (ಸಂಪೂರ್ಣ ಮಾಹಿತಿ ಒದಗಿಸುವುದು) | |

ಸಂಖ್ಯೆ: ಮೂಅಇ 117 ರಾಅವಿ 2024

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು